Akashvani : Bangalore
Regional Bulletin In Kannada
28.10.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರೈಲ್ವೆ ಇಲಾಖೆಯಲ್ಲಿ ಕಳೆದ ೪ ವರ್ಷಗಳಲ್ಲಿ ೭ ಲಕ್ಷಕ್ಕೂ ಅಧಿಕ ಉದ್ಯೋಗ ಸೃಷ್ಟಿ- ಸಚಿವ ವಿ.ಸೋಮಣ್ಣ
- ಮುಡಾ ಪ್ರಕರಣ: ಬೆಂಗಳೂರು, ಮೈಸೂರಿನಲ್ಲಿ ಉದ್ಯಮಿಗಳ ನಿವಾಸಗಳ ಮೇಲೆ ಇಡಿ ದಾಳಿ
- ವಿಧಾನಸಭೆ ಉಪ ಚುನಾವಣೆ; ಇಂದು ನಾಮಪತ್ರ ಪರಿಶೀಲನೆ
- ವಕ್ಫ್ ಹೆಸರಲ್ಲಿ ರೈತರ ಜಮೀನು ಕಬಳಿಕೆಗೆ ಯತ್ನ- ಶಾಸಕ ಶರಣಗೌಡ ಕಂದಕೂರ್ ಆರೋಪ

<><*<><>*><>

ವಿಶ್ವದ ಭೂಪಟದಲ್ಲಿ ಭಾರತೀಯ ರೈಲ್ವೆ ಇಲಾಖೆಯನ್ನು ಐದನೇ ಸ್ಥಾನದಿಂದ ಮೂರನೇ ಸ್ಥಾನಕ್ಕೆ ಕೊಂಡೊಯ್ಯುವ ಗುರಿ ಹೊಂದಲಾಗಿದೆ. ಕಳೆದ ನಾಲ್ಕು ವರ್ಷಗಳಲ್ಲಿ ೭ ಲಕ್ಷಕ್ಕೂ ಅಧಿಕ ಉದ್ಯೋಗ ಸೃಷ್ಟಿ ಮಾಡುವ ಮೂಲಕ ಹೊಸ ಮೈಲಿಗಲ್ಲು ಸ್ಥಾಪಿಸಲಾಗಿದೆ ಎಂದು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ಹಾಸನದಲ್ಲಿ ಇಂದು ಕುಟುಂಬ ಸಮೇತ ಹಾಸನಾಂಬ ದೇವಿಯ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ವಿ.ಸೋಮಣ್ಣ, ೪೪ ಸಾವಿರ ರೈಲ್ವೆ ಡಬ್ಬಲ್ ಲೈನ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಿ, ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಧ್ವನಿ: ವಿ.ಸೋಮಣ್ಣ, ಕೇಂದ್ರ ಸಚಿವರು.

ದೇಶದ ೨೪ ರಾಜ್ಯಗಳ ೨೯೪ ಜಿಲ್ಲಾ ಕೇಂದ್ರಗಳಲ್ಲಿ ೧೦೪ ವಂದೇ ಭಾರತ್ ರೈಲುಗಳು ಈಗಾಗಲೇ ಸಂಚರಿಸುತ್ತಿವೆ. ಕರ್ನಾಟಕದಲ್ಲಿ ಈಗಾಗಲೇ ೧೦ ವಂದೇ ಭಾರತ್ ರೈಲುಗಳು ಸಂಚರಿಸುತ್ತಿವೆ. ಜೊತೆಗೆ ಪ್ರತಿ ರೈಲಿಗೆ ನಾಲ್ಕರಂತೆ ಹೊಸದಾಗಿ ೩೦ ಸಾವಿರ ಹೊಸ ಬೋಗಿಗಳನ್ನು ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು. ತುಮಕೂರಿನಿಂದ ಬೆಂಗಳೂರಿಗೆ ಹೊಸದಾಗಿ ಮೆಮೊ ರೈಲು ಸಂಚಾರ ಆರಂಭಿಸಲಾಗಿದೆ. ಹಾಸನದಿಂದ ಬೆಂಗಳೂರಿಗೆ ಇರುವ ಪ್ರಯಾಣ ದರ ತಗ್ಗಿಸಲು ಚಿಂತಿಸಲಾಗಿದೆ ಎಂದು ಸಚಿವ ವಿ.ಸೋಮಣ್ಣ ತಿಳಿಸಿದರು.

<><*<><>*><>

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬೆಂಗಳೂರು, ಮೈಸೂರಿನಲ್ಲಿ ಉದ್ಯಮಿಗಳ ನಿವಾಸಗಳ ಮೇಲೆ ಇಂದು ದಾಳಿ ನಡೆಸಿದ್ದಾರೆ. ಉದ್ಯಮಿಗಳು ಹಾಗೂ ಮುಡಾ ನಡುವೆ ಹಣ ವರ್ಗಾವಣೆ ನಡೆದಿರುವ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆಸಲಾಗಿದೆ. ಬೆಂಗಳೂರಿನ ಡಾಲರ್ ಕಾಲೊನಿಯಲ್ಲಿರುವ ಉದ್ಯಮಿಯ ನಿವಾಸದ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ, ಪರಿಶೀಲನೆ ನಡೆಸಿದ್ದಾರೆ. ಉದ್ಯಮಿಯು, ಬೆಂಗಳೂರು ಮತ್ತು ಮೈಸೂರಿನಲ್ಲಿ ರಿಯಲ್ ಎಸ್ಟೇಟ್, ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ತಿಳಿಸಿದೆ. ಪ್ರಕರಣದ ನಾಲ್ಕನೇ ಆರೋಪಿ, ಜಮೀನು ಮಾಲೀಕ ಜೆ.ದೇವರಾಜು ಅವರ ನಿವಾಸದಲ್ಲೂ ಅಧಿಕಾರಿಗಳು ಶೋಧ ನಡೆಸಿದ್ದಾರೆ. ಇತ್ತೀಚೆಗೆ ಮುಡಾ ಕಚೇರಿ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ, ಎರಡು ದಿನಗಳ ಕಾಲ ಪರಿಶೀಲನೆ ನಡೆಸಿದ್ದರು. ಈ ನಡುವೆ ಪ್ರಕರಣದ ತನಿಖೆ ನಡೆಸುತ್ತಿರುವ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು, ಕಳೆದ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ವಿಚಾರಣೆ ನಡೆಸಿದ್ದರು. ಲೋಕಾಯುಕ್ತ ಅಧಿಕಾರಿಗಳಿಂದ ಮೂರು ಗಂಟೆಗಳ ಕಾಲ ನಡೆದ ವಿಚಾರಣೆಯಲ್ಲಿ, ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಿದ ಪತ್ರಕ್ಕೆ ವೈಟ್ನರ್ ಹಾಕಿರುವುದನ್ನು ಪಾರ್ವತಿ ಒಪ್ಪಿಕೊಂಡಿದ್ದಾರೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ತಿಳಿಸಿದೆ. ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಆರೋಪಿಯಾಗಿದ್ದು, ಅವರ ಪತ್ನಿ ಎರಡನೇ ಆರೋಪಿಯಾಗಿದ್ದಾರೆ.

<><*<><>*><>

ರಾಜ್ಯದ ಶಿಗ್ಗಾಂವಿ, ಚನ್ನಪಟ್ಟಣ, ಸಂಡೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ನವೆಂಬರ್ ೧೩ ರಂದು ಮತದಾನ ನಡೆಯಲಿದೆ. ಇಂದು ನಾಮಪತ್ರ ಪರಿಶೀಲನೆ ಕಾರ್ಯ ನಡೆಯುತ್ತಿದೆ. ಇದೇ ೩೧ ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ನವೆಂಬರ್ ೨೩ ರಂದು ಫಲಿತಾಂಶ ಹೊರಬೀಳಲಿದೆ. ಈಗಾಗಲೇ ಮೂರು ಕ್ಷೇತ್ರಗಳಲ್ಲಿ ರಾಜಕೀಯ ಪಕ್ಷಗಳು ಚುನಾವಣಾ ಪ್ರಚಾರ ಆರಂಭಿಸಿವೆ.

<><*<><>*><>

ಮಾದರಿ ನೀತಿ ಸಂಹಿತೆಯ ಯಾವುದೇ ಉಲ್ಲಂಘನೆಗಳ ಕುರಿತು ಸಾರ್ವಜನಿಕರು ಭಾರತದ ಚುನಾವಣಾ ಆಯೋಗದ ಸಿ-ವಿಜಿಲ್ ಆಪ್‌ನ ಸಹಾಯದೊಂದಿಗೆ ನೇರವಾಗಿ ದೂರು ನೀಡಬಹುದಾಗಿದೆ ಎಂದು ಬಳ್ಳಾರಿ ಜಿಲ್ಲಾ ಚುನಾವಣಾ ಅಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದ್ದಾರೆ. ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಗಳನ್ನು ನಡೆಸಲು ಸಾರ್ವಜನಿಕರ ಸಹಭಾಗಿತ್ವವೂ ಅತ್ಯಮೂಲ್ಯವಾಗಿದೆ. ಮುಕ್ತ, ಪಾರದರ್ಶಕ ಚುನಾವಣೆ ನಡೆಸಲು ಮತ್ತು ಚುನಾವಣಾ ಅಕ್ರಮ ತಡೆಯಲು ಇದು ಸಹಕಾರಿಯಾಗಿದೆ ಎಂದು ಹೇಳಿದರು. ಮತದಾರರಿಗೆ

ಯಾವುದೇ ರೀತಿಯ ಆಮಿಷ, ಅಕ್ರಮ ಪ್ರಚಾರ, ಸರ್ಕಾರಿ ಸಂಪನ್ಮೂಲಗಳ ದುರುಪಯೋಗ ಅಥವಾ ಯಾವುದೇ ರೀತಿಯಲ್ಲೂ ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಕುರಿತು ಸಾರ್ವಜನಿಕರು ಸಿ-ವಿಜಿಲ್ ಆಪ್ ಮೂಲಕ ದೂರು ನೀಡಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ರೈತರ ಜಮೀನನ್ನು ವಕ್ಫ್ ಆಸ್ತಿ ಹೆಸರಲ್ಲಿ ಕಬಳಿಕೆ ಮಾಡಲು ಯತ್ನಿಸಲಾಗುತ್ತಿದೆ ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ್ ಆರೋಪಿಸಿದ್ದಾರೆ. ಯಾದಗಿರಿ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯ ರೈತರ ಜಮೀನಿಗಳು ವಕ್ಫ್ ಆಸ್ತಿ ಎಂದು ಹೇಗೆ ನಮೂದು ಆಯಿತು ಎಂಬುದೇ ಯಕ್ಷ ಪ್ರಶ್ನೆ. ಈ ಕುರಿತು ತನಿಖೆ ನಡೆಯಬೇಕಾಗಿದೆ ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಯಾವುದೇ ಪ್ರದೇಶದ ರೈತರಿಗೆ ಅನ್ಯಾಯವಾದರೂ ಅವರ ಪರ ಧ್ವನಿ ಎತ್ತಲಾಗುವುದು. ಸದನದ ಹೊರಗೆ ಮತ್ತು ಒಳಗೆ ಹೋರಾಟ ಸಂಘಟಿಸಲಾಗುವುದು ಎಂದು ಹೇಳಿದರು. ಯಾದಗಿರಿಯಲ್ಲೇ ವಕ್ಫ್ ಆಸ್ತಿಯನ್ನು ಪ್ರಭಾವಿಗಳು ಕಬಳಿಸಿದ್ದಾರೆ. ವಕ್ಫ್ ಮಂಡಳಿಯವರು ಮೊದಲು ತಮ್ಮ ಆಸ್ತಿಯನ್ನು ಉಳಿಸಿಕೊಳ್ಳಬೇಕು. ಯಾದಗಿರಿ ಜಿಲ್ಲಾಡಳಿತ ಭವನದ ಸುತ್ತಲಿನ ವಕ್ಫ್ ಆಸ್ತಿಯನ್ನೇ ಕಬಳಿಕೆ ಮಾಡಲಾಗಿದೆ ಎಂದು ಆರೋಪಿಸಿದ ಶಾಸಕ ಶರಣಗೌಡ ಕಂದಕೂರ್, ಈ ಬಗ್ಗೆ ಚಳಿಗಾಲದ ಅಧಿವೇಶನದಲ್ಲಿ ಧ್ವನಿ ಎತ್ತಲಾಗುವುದು ಎಂದು ತಿಳಿಸಿದರು.

<><*<><>*><>

ಪ್ರವಾಸಿಗರನ್ನು ಮತ್ತು ಮಕ್ಕಳನ್ನು ಆಕರ್ಷಿಸಲು ಕಾರವಾರದ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಮಕ್ಕಳ ಆಟಿಕೆ ವ್ಯವಸ್ಥೆ ಹಾಗೂ ಿಂಡ್ ಲೈನ್ ನಂತಹ ಸಾಹಸ ಚಟುವಟಿಕೆಗಳನ್ನು ಅಳವಡಿಸಲು ಯೋಜನೆ ರೂಪಿಸಲು ಚಿಂತಿಸಲಾಗುತ್ತಿದೆ ಎಂದು ಕಾರವಾರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ ಸಿ. ತಿಳಿಸಿದ್ದಾರೆ. ಕಾರವಾರದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಯಲ್ಲಿ ನಡೆದ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸುಮಾರು ೪ ಕೋಟಿ ೫ ಲಕ್ಷ ರೂಪಾಯಿ ವೆಚ್ಚದಲ್ಲಿ ಕೆ-ಶೋರ್ ಯೋಜನೆಯಡಿ ಸಮುದ್ರ ಜೀವಿಗಳ ಸಂರಕ್ಷಣೆ ಮತ್ತು ಪುನರ್ವಸತಿ ಕೇಂದ್ರ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಈ ಕೇಂದ್ರ ಸ್ಥಾಪನೆಯಾದಲ್ಲಿ ಅಳವಿನಂಚಿನಲ್ಲಿರುವ ಜೀವಿಗಳ ಸಂರಕ್ಷಣೆ ಮತ್ತು ಅವುಗಳ ಅಧ್ಯನಕ್ಕೆ ಅನುಕೂಲವಾಗಲಿದೆ. ಹೀಗಾಗಿ ಸಮಿತಿ ಸದಸ್ಯರ ಸಲಹೆ ಸಹಕಾರ ಆಗತ್ಯವಾಗಿದೆ ಎಂದರು. ಪ್ರವಾಸಿಗರನ್ನು

ಆಕರ್ಷಿಸಲು ಪ್ರಸಕ್ತ ಸಾಲಿನಲ್ಲಿ ಮಕ್ಕಳ ಅಟಿಕೆ ಸಾಮಾಗ್ರಿ, ಪರಿಸರ ಸ್ನೇಹಿ ಕುರ್ಚಿಗಳನ್ನು ಅಳವಡಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ದಾವಣಗೆರೆ ಜಿಲ್ಲಾದ್ಯಂತ ಇದೇ ೨೦ ರವರೆಗೆ ಜಾನುವಾರುಗಳಿಗೆ ಆರನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಕೇಂದ್ರ ಸರ್ಕಾರ ೨ ಲಕ್ಷದ ೬೦ ಸಾವಿರ ಡೋಸ್ ಲಸಿಕೆ ಸರಬರಾಜು ಮಾಡಿದೆ ಎಂದು ಜಿಲ್ಲಾ ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆಯ ಉಪನಿರ್ದೇಶಕ ಡಾ.ಚಂದ್ರಶೇಖರ್ ಸುಂಕದ್ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿರುವ ಅವರು, ಜಿಲ್ಲೆಯಲ್ಲಿ ೩ ಲಕ್ಷ ೨೯ ಸಾವಿರದ ೬೯೮ ಜಾನುವಾರುಗಳಿದ್ದು, ಶೇ.೧೦೦ ರಷ್ಟು ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದರು. ಲಸಿಕೆ ನೀಡಲು ೨ ಸಾವಿರದ ೮೦೦ ಬ್ಲಾಕ್‌ಗಳನ್ನು ರಚಿಸಲಾಗಿದೆ. ೩೨೧ ಸಿಬ್ಬಂದಿ ಲಸಿಕೆ ನೀಡಲಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಹಸಿ ಮತ್ತು ಒಣ ಕಸವನ್ನು ಮೂಲದಲ್ಲೇ ಬೇರ್ಪಡಿಸಿ ಕೊಡುವುದರಿಂದ ಕಸವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಿ, ರೈತರ ಜಮೀನುಗಳಿಗೆ ಗೊಬ್ಬರವನ್ನೂ ಉತ್ಪಾದಿಸಿಕೊಡಬಹುದು ಎಂದು ಚಿಕ್ಕಬಳ್ಳಾಪುರ ನಗರಸಭೆ ಅಧ್ಯಕ್ಷ ಎ.ಗಜೇಂದ್ರ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ನಗರದ ೭ನೇ ವಾರ್ಡ್‌ನ ಮನೆಗಳಿಗೆ ಭೇಟಿ ನೀಡಿ ಕಸ ವಿಂಗಡಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಮಾತನಾಡಿದರು. ನಗರದಲ್ಲಿ ದಿನನಿತ್ಯ ಉತ್ಪಾದನೆಯಾಗುತ್ತಿರುವ ಕಸವನ್ನು ಮೂಲದಲ್ಲೇ ವಿಂಗಡಿಸಿ, ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿದೆ. ಸ್ವಯಂ ಸೇವಾ ಸಂಸ್ಥೆಯ ಸಹಭಾಗಿತ್ವದೊಂದಿಗೆ ರೈತರ ಜಮೀನುಗಳಲ್ಲೇ ಕಸವನ್ನು ಗೊಬ್ಬರವನ್ನಾಗಿ ಪರಿವರ್ತಿಸಿ, ಉಚಿತವಾಗಿ ನೀಡಲಾಗುತ್ತಿದೆ. ಇದರಿಂದ ರೈತರಿಗೆ ಅನುಕೂಲವಾಗುತ್ತಿದೆ ಎಂದರು.

<><*<><>*><>

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಸ್ಪರ್ಧೆಗಳನ್ನು ನವೆಂಬರ್ ೬ರ ಬೆಳಗ್ಗೆ ೧೦ ಗಂಟೆಗೆ ಕೋಲಾರ ನಗರದ ಕ್ಲಾಕ್ ಟವರ್ ಸಮೀಪವಿರುವ ಅಲ್ ಅಮೀನ್ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಉಮಾ ತಿಳಿಸಿದ್ದಾರೆ. ಈಗಾಗಲೇ ಕ್ಲಸ್ಟರ್ ಹಂತದ ಪ್ರತಿಭಾ ಕಾರಂಜಿ, ಕಲೋತ್ಸವ ಸ್ಪರ್ಧೆಗಳು ಮುಕ್ತಾಯಗೊಂಡಿದ್ದು, ಇದರಲ್ಲಿ ಪ್ರಥಮ ಸ್ಥಾನ ಪಡೆದ ಎಲ್ಲಾ ಮಕ್ಕಳನ್ನು ತಾಲೂಕು ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ

ಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು ಕ್ರಮವಹಿಸಬೇಕು ಎಂದು ಸೂಚಿಸಿದ್ದಾರೆ.?

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು 'ಜಾಗೃತಿ ಅರಿವು ಸಪ್ತಾಹ-೨೦೨೪"ರ ಆಚರಣೆಯ ಅಂಗವಾಗಿ ಸಚಿವಾಲಯದ ಅಧಿಕಾರಿಗಳು ಮತ್ತು ನೌಕರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನದಲ್ಲಿ ಸಭಾಂಗಣದಲ್ಲಿ ಇಂದು ಪ್ರತಿಜ್ಞಾ ವಿಧಿ ಬೋಧಿಸಿದರು.

೨. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಗೌನಿಪಲ್ಲಿ ಗ್ರಾಮದ ಶ್ರೀರಾಮಪ್ಪ ಎಂಬುವವರ ಗೋದಾಮಿನ ಮೇಲೆ ತಹಸೀಲ್ದಾರ್ ಜಿ.ಎನ್.ಸುದೀಂದ್ರ ನೇತೃತ್ವದ ಅಧಿಕಾರಿಗಳ ತಂಡ ದಾಳಿ ನಡೆಸಿದೆ. ಈ ವೇಳೆ ಗೋದಾಮಿನಲ್ಲಿ ಅಕ್ರಮವಾಗಿ ಸಂಗ್ರಹಿಸಿದ್ದ ೧೦೦ ಬಾಕ್ಸ್ ಪಟಾಕಿಗಳನ್ನು ವಶಕ್ಕೆ ಪಡೆದುಕೊಂಡಿದೆ.

೩. ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಇದೇ ೩೦ ರಂದು ಬೆಳಗ್ಗೆ ೧೦ ಗಂಟೆಗೆ ಬಾಗೇಪಲ್ಲಿ ತಾಲೂಕು ಕೊತ್ತಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊನ್ನಂಪಲ್ಲಿ ಕ್ರಾಸ್ ಬಳಿ ಸಾರ್ವಜನಿಕರ ಕುಂದು-ಕೊರತೆಗಳ ಸಭೆ ನಡೆಸಿ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>